74 (186) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯು ಹಿಂಬಾಕಿ ಹುದ್ದೆಗಳ ಭರ್ತಿ ವಿಷಯದಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದೆಯೇ ;

ಆ) ಹಾಗಿದ್ದಲ್ಲಿ, ಇಲಾಖೆ ನೀಡಿದ ಸೂಚನೆಗಳನ್ನು ಉಳಿದ ಇಲಾಖೆಗಳಲ್ಲದೆ ಸ್ವಾಯತ್ತ ಸಂಸ್ಥೆಗಳು ಕಟ್ಟುನಿಟ್ಟಾಗಿ ಪಾಲಿಸಿವೆಯೇ ; (ಇಲಾಖಾವಾರು ಮಾಹಿತಿ ನೀಡುವುದು) ಪಾಲಿಸದಿದ್ದಲ್ಲಿ ಕೈಗೊಂಡ ಕ್ರಮವೇನು ;

ಇ) ಸಮಾಜ ಕಲ್ಯಾಣ ಇಲಾಖೆಯ ಸಲಹೆ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸದಂತಹ ಇಲಾಖೆ ಮತ್ತು ಸಂಸ್ಥೆಗಳಿಗೆ ನೀಡುವ ಅನುದಾನವನ್ನು ಕಡಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಹೌದು. ಪಾಲನೆ ಮಾಡುವುದರಿಂದ ಹುದ್ದೆಗಳ ಪ್ರಕಟಣೆ ಆಗಿದೆ ಮತ್ತು ನೇಮಕಾತಿ ಆದೇಶಗಳು ಹೊರಡಿಸಲ್ಪಡುತ್ತಿವೆ.

ಇ) ಸಮಾಜ ಕಲ್ಯಾಣ ಇಲಾಖೆಯ ಸೂಚನೆಗಳನ್ನು ಪಾಲಿಸದಂತಹ ಇಲಾಖೆ/ಸಂಸ್ಥೆಗಳಿಗೆ ಅನುದಾನ ಕಡಿತಗೊಳಿಸಲು ನಿಯಮಗಳಲ್ಲಿ ಅವಕಾಶ ವಿರುವುದಿಲ್ಲ.

75 (187) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

ಆ) ಸದರಿ ಮೊರಾರ್ಜಿ ದೇಸಾಯಿ ಶಾಲೆಗಳು ಯಾವ ಯಾವ ಇಲಾಖೆಗಳ ನಿಯಂತ್ರಣದಲ್ಲಿವೆ ;

ಇ) ಮೊರಾರ್ಜಿ ದೇಸಾಯಿ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರುಗಳ ಸಂಖ್ಯೆ ಎಷ್ಟು ;

ಈ) ಬಹಳಷ್ಟು ಶಿಕ್ಷಕರುಗಳ ಹುದ್ದೆಗಳು ಖಾಲಿ ಇದ್ದು, ತಾತ್ಕಾಲಿಕವಾಗಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳನ್ನು ಖಾಯಂ ಮಾಡಲು ಸರ್ಕಾರ ಮುಂದಾಗುವುದೇ;

ಉ) ನವೋದಯ ಶಾಲೆಗಳ ಮಾದರಿಯಲ್ಲಿ ರಾಜ್ಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ನಡೆಸದೇ ಇರುವ ಕಾರಣವೇನು ;

ಊ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

ಋ) ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಓದುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;